ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.**

ಸಂಖ್ಯೆ : ಎ.ಡಿ.ಎ೦2(1)ಜಾ.ಅ.ಸ/01/2017-18 ದಿನಾಂಕ: 29-10-2017

# ಸುತ್ತೋಲೆ

ವಿಷಯ: "ಜಾಗೃತಿ ಅರಿವು ಸಪ್ತಾಹ -2017"ರ ಆಚರಣೆ ಕುರಿತು.

ಉಲ್ಲೇಖ: ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ಬೆಂಗಳೂರುರವರ ಸುತ್ತೋಲೆ ಸಂಖ್ಯೆ: ಸಿಆಸುಇ 137 ಸೇಲೋಯು 2017 ದಿನಾಂಕ:03.10.2017.

*******

ಭ್ರಷ್ಟಾಚಾರದ ವಿರುದ್ಧ ಜಾಗೃತಿ ಮೂಡಿಸಲು ದಿನಾಂಕ:30.10.2017 ರಿಂದ 04.11.2017ರವರೆಗೆ "ಜಾಗೃತಿ ಅರಿವು ಸಪ್ತಾಹ(Vigilance Awareness Week)" ಅನ್ನು ಆಚರಿಸುವ ಸಲುವಾಗಿ ಕೇಂದ್ರ ಸರ್ಕಾರವು ಎಲ್ಲಾ ರಾಜ್ಯಗಳ ಸಚಿವಾಲಯ, ಕೇಂದ್ರ/ರಾಜ್ಯ ಸರ್ಕಾರಿ ಸಂಸ್ಥೆಗಳು, ಸಾರ್ವಜನಿಕ ವಲಯ ಬ್ಯಾಂಕ್‌ಗಳು ಹಾಗೂ ಎಲ್ಲಾ ಸಂಸ್ಥೆಗಳಿಗೆ ದಿನಾಂಕ:17.08.2017ರ ಸುತ್ತೋಲೆಯಲ್ಲಿ ಸೂಚಿಸಿ, My Vision-Corruption Free India ಎಂಬ ಥೀಮ್‌ನೊಂದಿಗೆ ಪ್ರತಿಜ್ಞಾವಿಧಿಯನ್ನು ಸ್ವೀಕರಿಸುವ ಮೂಲಕ ಆಚರಿಸುವಂತೆ ಸೂಚಿಸಲಾಗಿದೆ.

ಜಾಗೃತಿ ಅರಿವು ಸಪ್ತಾಹದ ಆಚರಣೆ ಸಮಯದಲ್ಲಿ ಪ್ರಮುಖ ಸ್ಥಳಗಳಲ್ಲಿ ಭಿತ್ತಿ ಪತ್ರಗಳನ್ನು ಪ್ರದರ್ಶಿಸುವುದು, ವಿಚಾರಗೋಷ್ಠಿಗಳನ್ನು ಆಯೋಜಿಸುವುದು, ಭ್ರಷ್ಟಾಚಾರ ವಿರೋಧಿ ವಿಷಯಗಳ ಕುರಿತಂತೆ ಚರ್ಚಾಸ್ಪರ್ಧೆಗಳು ಹಾಗೂ ಭಾಷಣಗಳನ್ನು ಶಾಲಾ ಕಾಲೇಜುಗಳಲ್ಲಿ ಆಯೋಜಿಸುವ ಮೂಲಕ ಅರಿವು ಮೂಡಿಸುವಂತೆ ಉಲ್ಲೇಖಿತ ಸುತ್ತೋಲೆಯಲ್ಲಿ ಸೂಚಿಸಲಾಗಿದೆ.

ಈ ಸಂಬಂಧ ಪ್ರತಿಜ್ಞಾ ಪ್ರತಿಯನ್ನು ಈ ಸುತ್ತೋಲೆಯೊಂದಿಗೆ ಅನುಬಂಧಿಸಿ ಕಳುಹಿಸುತ್ತಾ, ಎಲ್ಲಾ ಶಾಲಾ ಕಾಲೇಜು/ಕಛೇರಿಗಳಲ್ಲಿ ದಿನಾಂಕ:30.10.2017 ರಿಂದ 04.11.2017ರವರೆಗೆ ಭ್ರಷ್ಟಾಚಾರದ ವಿರುದ್ಧ ಜಾಗೃತಿ ಮೂಡಿಸುವ ಸಲುವಾಗಿ "ಜಾಗೃತಿ ಅರಿವು ಸಪ್ತಾಹ-2017" ಅನ್ನು ಹಮ್ಮಿಕೊಂಡು ಪ್ರಮುಖ ಸ್ಥಳಗಳಲ್ಲಿ ಭಿತ್ತಿ ಪತ್ರಗಳನ್ನು ಪ್ರದರ್ಶಿಸುವುದು, ವಿಚಾರಗೋಷ್ಠಿಗಳನ್ನು ಆಯೋಜಿಸುವುದು, ಭ್ರಷ್ಟಾಚಾರ ವಿರೋಧಿ ವಿಷಯಗಳ ಕುರಿತಂತೆ ಚರ್ಚಾಸ್ಪರ್ಧೆಗಳು ಹಾಗೂ ಭಾಷಣಗಳನ್ನು ಶಾಲಾ ಕಾಲೇಜುಗಳಲ್ಲಿ ಆಯೋಜಿಸುವ ಮೂಲಕ ಅರಿವು ಮೂಡಿಸುವಂತೆ ಸೂಚಿಸಿದೆ.

(ಬಿ.ಕೆ.ಬಸವರಾಜ)
ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

**ಇವರಿಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರುರವರ ಮಾಹಿತಿಗಾಗಿ.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ವಿಕಾಸಸೌಧ, ಬೆಂಗಳೂರುರವರ ಮಾಹಿತಿಗಾಗಿ.
3. ಅಪರ ಆಯುಕ್ತರು, ಧಾರವಾಡ/ಕಲಬುರಗಿ ಆಯುಕ್ತಾಲಯರವರ ಮಾಹಿತಿಗಾಗಿ.
4. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ ಮಾಹಿತಿಗಾಗಿ.
5. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ವಿಭಾಗಗಳ ಸಹ ನಿರ್ದೇಶಕರುಗಳಿಗೆ ಮಾಹಿತಿಗಾಗಿ.
6. ಜಂಟಿ ನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರುರವರಿಗೆ ಮಾಹಿತಿಗಾಗಿ.
7. ಮಾನ್ಯ ಆಯುಕ್ತರ ಆಪ್ತ ಕಾರ್ಯದರ್ಶಿಯವರ ಮಾಹಿತಿಗಾಗಿ.
8. ಕಛೇರಿ ಪ್ರತಿ.

# ಪ್ರತಿಜ್ಞೆ

ನಮ್ಮ ದೇಶದ ಆರ್ಥಿಕ, ರಾಜಕೀಯ ಮತ್ತು ಸಾಮಾಜಿಕ ಅಭಿವೃದ್ಧಿಗೆ ಭ್ರಷ್ಟಾಚಾರವು ಒಂದು ಪ್ರಮುಖ ಅಡಚಣೆಯಾಗಿದೆಯೆಂದು ನಾನು ನಂಬುತ್ತೇನೆ. ಭ್ರಷ್ಟಾಚಾರವನ್ನು ನಿರ್ಮೂಲನೆ ಮಾಡಲು ಸರ್ಕಾರ, ನಾಗರಿಕರು ಮತ್ತು ಖಾಸಗಿ ವಲಯದಂತಹ ಎಲ್ಲಾ ಪಾಲುದಾರರು ಒಟ್ಟಾಗಿ ಕೆಲಸ ಮಾಡಬೇಕಾಗುತ್ತದೆಂದು ನಾನು ನಂಬುತ್ತೇನೆ.

ಪ್ರತಿ ನಾಗರಿಕನು ಜಾಗರೂಕನಾಗಿದ್ದು, ಎಲ್ಲಾ ಸಮಯದಲ್ಲೂ ಉನ್ನತ ಗುಣಮಟ್ಟದ ಪ್ರಾಮಾಣಿಕತೆ ಮತ್ತು ನಿಷ್ಠೆಗೆ ಬದ್ಧನಾಗಿರಬೇಕೆಂದು ಹಾಗೂ ಭ್ರಷ್ಟಾಚಾರದ ವಿರುದ್ಧ ಹೋರಾಟವನ್ನು ಬೆಂಬಲಿಸಬೇಕೆಂದು ನಾನು ಅರಿತಿದ್ದೇನೆ.

**ಆದ್ದರಿಂದ, ನಾನು ಈ ರೀತಿ ಪ್ರತಿಜ್ಞೆ ಮಾಡುತ್ತೇನೆ :-**

- ಜೀವನದ ಎಲ್ಲಾ ಕ್ಷೇತ್ರಗಳಲ್ಲಿ ಪ್ರಾಮಾಣಿಕತೆ ಮತ್ತು ಕಾನೂನಿನ ನಿಯಮಗಳನ್ನು ಅನುಸರಿಸುತ್ತೇನೆ;
- ಲಂಚವನ್ನು ಪಡೆಯುವುದಿಲ್ಲ ಹಾಗೂ ನೀಡುವುದೂ ಇಲ್ಲ;
- ಎಲ್ಲಾ ಕಾರ್ಯಗಳನ್ನು ಪ್ರಾಮಾಣಿಕ ಮತ್ತು ಪಾರದರ್ಶಕ ರೀತಿಯಲ್ಲಿ ನಿರ್ವಹಿಸುತ್ತೇನೆ;
- ಸಾರ್ವಜನಿಕ ಹಿತಾಸಕ್ತಿಯಲ್ಲಿ ಕಾರ್ಯನಿರ್ವಹಿಸುತ್ತೇನೆ;
- ವೈಯಕ್ತಿಕ ನಡವಳಿಕೆಯಲ್ಲಿ ನಿಷ್ಠೆ ಪ್ರದರ್ಶಿಸುವ ಮೂಲಕ ಮಾದರಿಯಾಗಿರುತ್ತೇನೆ;
- ಯಾವುದೇ ಭ್ರಷ್ಟಾಚಾರದ ಘಟನೆಯನ್ನು ಸೂಕ್ತ ಸಂಸ್ಥೆಗೆ ವರದಿ ಮಾಡುತ್ತೇನೆ.

*****

# Integrity Pledge

I believe that corruption has been one of the major obstacles to economic, political and social progress of our country. I believe that all stakeholders such as Government, citizens and private sector need to work together to eradicate corruption.

I realise that every citizen should be vigilant and commit to highest standards of honesty and integrity at all times and support the fight against corruption.

I, therefore, pledge:

- To follow probity and rule of law in all walks of life;
- To neither take nor offer bribe;
- To perform all tasks in an honest and transparent manner;
- To act in public interest;
- To lead by example exhibiting integrity in personal behaviour;
- To report any incident of corruption to the appropriate agency.

*****